**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 2003/2014**

| | | | |
|---|---|---|---|
| ಸಾಕ್ಷಿದಾರರ ಹೆಸರು | | ರಮೇಶ | ಪ್ರಾಸಾಃ 6 |
| ತಂದೆಯ/ಗಂಡನ ಹೆಸರು | | ಮಹದೇವು | ಚಾಸಾಃ 6 |
| ವಯಸ್ಸು | | 60 ವರ್ಷ | |
| ಕೆಲಸ | | ಕೂಲಿ | ಸಾ ಪ್ರ ಬೋ |
| ವಾಸ | | ಕೆಂಪಿಸಿದ್ದನಹುಂಡಿ ಗ್ರಾಮ | ದಿಃ 31/07/2024 |

ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಯಿತು ಅದು ಸ್ಥಳ ಮಹಜರ್ ಆಗಿದ್ದು, ಅದು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 (ಸಿ) ಎಂದು ಗುರುತಿಸಲಾಯಿತು. 2014 ನೇ ಇಸವಿಯಲ್ಲಿ ನಾನು ಅಪಘಾತದ ವಿಚಾರದಲ್ಲಿ ನಾನು ಆಸ್ಪತ್ರೆಯಲ್ಲಿ ಸ್ಥಳ ಮಹಜರ್ ಗೆ ಸಹಿ ಮಾಡಿರುತ್ತೇನೆ. ಇಷ್ಟು ವಿಚಾರಗಳು ಬಿಟ್ಟರೆ ನನಗೆ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಶ್ರೀ. ಎ.ಪಿ.ಪಿ.ಯವರಿಂದಃ

ದಿನಾಂಕ 19.05.2014 ರಂದು ನಂಜನಗೂಡು ಚಾಮರಾಜನಗರ ಮುಖ್ಯ ರಸ್ತೆಯಲ್ಲಿ ಮಹದೇವನಗರದ ಬಳಿ ಪೋಲಿಸರು ಸ್ಥಳ ಮಹಜರ್ ಮಾಡಿ ಅಪಘಾತಕ್ಕೆ ಈಡಾದ ಕೆ ಎಸ್ ಆರ್ ಟಿ ಸಿ ಬಸ್ ಕೆಎ-09-ಎಫ್-3350 ಹಾಗೂ ದ್ವಿಚಕ್ರ ವಾಹನ ಸಂಖ್ಯೆ ಕೆಎ-09-ಇಡಬ್ಲ್ಯೂ-8515 ಟಿ ವಿ ಎಸ್ ಸ್ಕೂಟರ್ ಅನ್ನು ಬೆಳಿಗ್ಗೆ 11.30 ಗಂಟೆಯಿಂದ ಮದ್ಯಾಹ್ನ 12.30 ಗಂಟೆಯವರೆಗೂ ಮಹಜರ್ ಬರೆದು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಅಪಘಾತದ ಸ್ಥಳದಲ್ಲಿ ನಿಪಿ-2 ಕ್ಕೆ ಸಹಿ

ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ,

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ ಎಂ ಒ

ಸಹಿ/-

1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ

ನಂಜನಗೂಡು